# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1165
ಉತ್ತರಿಸಬೇಕಾದ ದಿನಾಂಕ : 15.12.2023
ಸದಸ್ಯರ ಹೆಸರು : ಶ್ರೀ ಸುನೀಲ್ ವಲ್ಯಾಪುರ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ಸಚಿವರು : ಮಾನ್ಯ ಪರಿಶಿಷ್ಟ ಪಂಗಡಗಳ ಕಲ್ಯಾಣ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ ಐದು ವರ್ಷಗಳಲ್ಲಿ ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಯುವಜನ ಸೇವೆಗಳು ಮತ್ತು ಕ್ರೀಡಾ ಇಲಾಖೆಯಿಂದ ಎಷ್ಟು ಅನುದಾನ ಮಂಜೂರು ಮಾಡಲಾಗಿದೆ; | ಕಳೆದು ಐದು ವರ್ಷಗಳಲ್ಲಿ ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಜಿಲ್ಲಾ ಪಂಚಾಯತ್ ಹಾಗೂ ರಾಜ್ಯ ವಲಯದ ಬಂಡವಾಳ ವೆಚ್ಚ ಯೋಜನೆಯಡಿ ಒಟ್ಟಾರೆಯಾಗಿ ರೂ.4450.68 ಲಕ್ಷಗಳನ್ನು ಮಂಜೂರು ಮಾಡಿ, ಬಿಡುಗಡೆ ಮಾಡಲಾಗಿರುತ್ತದೆ. |
| ಆ) | ಸದರಿ ಅನುದಾನದಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; (ಕಳೆದ ಐದು ವರ್ಷಗಳ ಕಾಮಗಾರಿವಾರು ಮತ್ತು ಅನುದಾನವಾರು ಮಾಹಿತಿ ನೀಡುವುದು) | ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆವತಿಯಿಂದ ಕಳೆದು ಐದು ವರ್ಷಗಳಲ್ಲಿ ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಬಿಡುಗಡೆ ಮಾಡಲಾದ ಅನುದಾನದ ಪೈಕಿ ರೂ.544.12 ಲಕ್ಷಗಳನ್ನು ಅಭಿವೃದ್ಧಿ ಕಾಮಗಾರಿಗಳಿಗೆ ವೆಚ್ಚ ಮಾಡಲಾಗಿರುತ್ತದೆ. ಈ ಅನುದಾನದಲ್ಲಿ ಕೈಗೊಂಡಿರುವ ಕಾಮಗಾರಿಗಳ ವಿವರಗಳನ್ನು **ಅನುಬಂಧದಲ್ಲಿ** ನೀಡಲಾಗಿದೆ. |
| ಇ) | ಕಲ್ಯಾಣ ಕರ್ನಾಟಕ ಭಾಗದಲ್ಲಿ ಹೊಸದಾಗಿ ರಚನೆಯಾಗಿರುವ ತಾಲ್ಲೂಕುಗಳಲ್ಲಿ ಕ್ರೀಡಾಂಗಣ ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; | ಹೌದು. |
| ಈ) | ಹಾಗಿದ್ದಲ್ಲಿ, ಯಾವಾಗ ಮಂಜೂರಾತಿ ನೀಡಿ ಕಾಮಗಾರಿ ಪ್ರಾರಂಭಿಸಲಾಗುವುದು? (ಸಂಪೂರ್ಣ ಮಾಹಿತಿ ನೀಡುವುದು) | ಹೊಸದಾಗಿ ರಚನೆಯಾಗಿರುವ ತಾಲ್ಲೂಕು ಕೇಂದ್ರಗಳಲ್ಲಿ ತಾಲ್ಲೂಕು ಕ್ರೀಡಾಂಗಣ ನಿರ್ಮಿಸಲು ಸೂಕ್ತ ನಿವೇಶನ ಗುರುತಿಸಲು ಈಗಾಗಲೇ ಕ್ರಮ ಜರುಗಿಸಲಾಗಿದ್ದು, ಸೂಕ್ತ ನಿವೇಶನ ಇಲಾಖೆಗೆ ಹಸ್ತಾಂತರಗೊಂಡ ನಂತರ, ಅನುದಾನ ಲಭ್ಯತೆ ಆಧರಿಸಿ ಹಂತ-ಹಂತವಾಗಿ ತಾಲ್ಲೂಕು ಕ್ರೀಡಾಂಗಣ ನಿರ್ಮಿಸಲು ಪರಿಶೀಲಿಸಲಾಗುವುದು. |

**ಸಂಖ್ಯೆ: ವೈಎಸ್‌ಡಿ-ಇಬಿಬಿ/95/2023**

**( ಬಿ. ನಾಗೇಂದ್ರ )**
ಪರಿಶಿಷ್ಟ ಪಂಗಡಗಳ ಕಲ್ಯಾಣ,
ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.

<u>ಅನುಬಂಧ</u>

**ಕಳೆದು ಐದು ವರ್ಷಗಳಲ್ಲಿ ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಕ್ರೀಡಾಂಗಣಗಳ ಅಭಿವೃದ್ಧಿ ಕಾಮಗಾರಿಗಳಿಗೆ ಬಿಡುಗಡೆ ಮಾಡಲಾದ ಅನುದಾನದ ವಿವರ.**

| ಕ್ರ. ಸಂ | ಕಾಮಗಾರಿ ವಿವರ | ಕಳೆದ ಐದು ವರ್ಷಗಳಲ್ಲಿ ಬಿಡುಗಡೆಯಾದ ಅನುದಾನ (ರೂ ಲಕ್ಷಗಳಲ್ಲಿ) | | | | | |
|---|---|---|---|---|---|---|---|
| | | **2018-19** | **2019-20** | **2020-21** | **2021-22** | **2022-23** | **ಒಟ್ಟು** |
| 1 | ಯಾದಗಿರಿ ಜಿಲ್ಲಾ ಕ್ರೀಡಾಂಗಣದಲ್ಲಿ ಈಜುಕೊಳ ನಿರ್ಮಾಣ | 42.75 | 67.50 | | | | 110.25 |
| 2 | ಯಾದಗಿರಿ ಜಿಲ್ಲಾ ಕ್ರೀಡಾಂಗಣದಲ್ಲಿ ಕ್ರೀಡಾ ವಸತಿ ನಿಲಯ ನಿರ್ಮಾಣ ಕಾಮಗಾರಿ. | | | | | 172.50 | 172.50 |
| 3 | ಕೊಪ್ಪಳ ಜಿಲ್ಲೆ ಗಂಗಾವತಿ ತಾಲ್ಲೂಕು ಕ್ರೀಡಾಂಗಣದಲ್ಲಿ ನಿರ್ಮಿಸಿರುವ ಈಜುಕೊಳದ ಹೆಚ್ಚುವರಿಕಾಮಗಾರಿ | 10.42 | | | | | 10.42 |
| 4 | ಕೊಪ್ಪಳ ಜಿಲ್ಲೆ ಕುಷ್ಟಗಿ ತಾಲ್ಲೂಕು ಕ್ರೀಡಾಂಗಣದ ಪೆವಿಲಿಯನ್ ಕಟ್ಟಡಕ್ಕೆ ಮೇಲ್ಛಾವಣಿ ಅಳವಡಿಸುವುದು. | | 15.00 | | 28.00 | | 43.00 |
| 5 | ಕೊಪ್ಪಳ ಜಿಲ್ಲೆ ಕುಕನೂರು ತಾಲ್ಲೂಕು ಕ್ರೀಡಾಂಗಣದ ಜಮೀನು ಭೂ ಸ್ವಾಧೀನಪಡಿಸಿಕೊಳ್ಳಲು. | | | | 71.84 | | 71.84 |
| 6 | ಬೀದರ್ ಜಿಲ್ಲಾ ಕ್ರೀಡಾಂಗಣದ ಸೌಲಭ್ಯಗಳನ್ನು ಮೇಲ್ದರ್ಜೆಗೇರಿಸುವುದು. | | 75.00 | | | | 75.00 |
| 7 | ಬಳ್ಳಾರಿ ಜಿಲ್ಲೆ ಸಿರುಗುಪ್ಪ ತಾಲ್ಲೂಕು ಕ್ರೀಡಾಂಗಣದಲ್ಲಿ ಶಿಥಿಲಗೊಂಡಿರುವ ಕಟ್ಟಡವನ್ನು ತೆರವುಗೊಳಿಸುವುದು. | | 2.51 | | | | 2.51 |
| 8 | ರಾಯಚೂರು ಜಿಲ್ಲೆ ಲಿಂಗಸಗೂರು ತಾಲ್ಲೂಕು ಕ್ರೀಡಾಂಗಣ ಅಭಿವೃದ್ಧಿ ಕಾಮಗಾರಿ. | | | | | 30.00 | 30.00 |
| 9 | ರಾಯಚೂರು ಜಿಲ್ಲೆ ಸಿಂಧನೂರು ತಾಲ್ಲೂಕು ಕ್ರೀಡಾಂಗಣ ಅಭಿವೃದ್ಧಿ ಕಾಮಗಾರಿ. | | | | | 28.60 | 28.60 |
| | | 53.17 | 160.01 | | 99.84 | 231.10 | **544.12** |